# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **18**

ಸದಸ್ಯರ ಹೆಸರು : ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 11-08-2025

ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| ಪ್ರಶ್ನೆ | | ಉತ್ತರ |
|---|---|---|
| ಅ) | ರಾಜ್ಯದ ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ರಾಜ್ಯದ ಇಂಧನ ಇಲಾಖೆಗೆ ಅವಶ್ಯವಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು; | **ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ:-** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ಅವಶ್ಯಕ ಹುದ್ದೆಗಳನ್ನು ಕಾಲಕಾಲಕ್ಕೆ ನೇಮಕಾತಿ ಹಾಗೂ ಪದೋನ್ನತಿಗಳ ಮೂಲಕ ಭರ್ತಿ ಮಾಡಲಾಗುತ್ತಿದ್ದು, ಗ್ರಾಹಕರಿಗೆ ಯಾವುದೇ ತೊಂದರೆಯಾಗದಂತೆ, ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯಿಂದ ಹಾಗೂ ಹೊರಗಿನ ಸಂಸ್ಥೆಗಳಿಂದ ಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ಪಡೆದು ನಿಗಮದ ದೈನಂದಿನ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ.<br>ಕವಿಪ್ರನಿನಿಯಲ್ಲಿ ದಿನಾಂಕ:31-03-2025ರ ಅಂತ್ಯಕ್ಕೆ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಗುಂಪುವಾರು ಹುದ್ದೆಗಳ ವಿವರಗಳು ಕೆಳಕಂಡಂತಿವೆ:- |

| ಗುಂಪು | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|
| ಎ | 1322 | 1069 | 253 |
| ಬಿ | 1520 | 1310 | 210 |
| ಸಿ | 6146 | 4647 | 1499 |
| ಡಿ | 7308 | 2703 | 4605 |
| **ಒಟ್ಟು** | **16296** | **9729** | **6567** |

ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ದಿನಾಂಕ:30-06-2025ರ ಅಂತ್ಯಕ್ಕೆ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಗುಂಪುವಾರು ಹುದ್ದೆಗಳ ವಿವರಗಳನ್ನು **ಅನುಬಂಧ-1ರಲ್ಲಿ** ಒದಗಿಸಲಾಗಿದೆ.

**ಕರ್ನಾಟಕ ವಿದ್ಯುತ್ ನಿಗಮ ನಿಯಮಿತ:-** ನಿಗಮದಲ್ಲಿ ಮಂಜೂರಾಗಿರುವ ವಿವಿಧ ವೃಂದ ಹುದ್ದೆಗಳ ವಿವರವು ಕೆಳಕಂಡಂತಿರುತ್ತದೆ.

| ಗ್ರೂಪ್ | ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರತ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|
| ಎ | 1525 | 824 |
| ಬಿ | 2212 | 968 |
| ಸಿ | 4039 | 1620 |
| ಡಿ | 387 | 56 |
| **ಒಟ್ಟು** | **8163** | **3468** |

**ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಇಂಧನ ಇಲಾಖೆಯ ವ್ಯಾಪ್ತಿಗೆ ಒಳಪಡುವ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದಲ್ಲಿ ದಿನಾಂಕ:30.06.2025ರ ಅಂತ್ಯಕ್ಕೆ ಮಂಜೂರಾದ ಹುದ್ದೆ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಹಾಗೂ ಖಾಲಿ ಇರು ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ.

| ಗ್ರೂಪ್ | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|
| ಎ | 661 | 553 | 128 |
| ಬಿ | 1086 | 821 | 265 |
| ಸಿ | 9718 | 6220 | 3498 |
| ಡಿ | 13139 | 6162 | 6977 |
| **ಒಟ್ಟು** | **24604** | **13736** | **10868** |

ಪ್ರಸ್ತುತ ಒಟ್ಟು 13736 ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ. (ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-2ರಲ್ಲಿ** ಒದಗಿಸಲಾಗಿದೆ).

**ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಮೆಸ್ಕಾಂ.,ನಲ್ಲಿ ಸಿಬ್ಬಂದಿ ಅವಶ್ಯಕತೆಗನುಗುಣವಾಗಿ ಕವಿಪ್ರನಿನಿ/ ಸರ್ಕಾರದಿಂದ ಹೊರಡಿಸಲಾಗುತ್ತಿರುವ ನಿಯಮಾವಳಿಗಳು/ ಸುತ್ತೋಲೆ/ ಆದೇಶಗಳನ್ನು ಅನುಸರಿಸಿಕೊಂಡು ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ.

ಮೆಸ್ಕಾಂ.,ನಲ್ಲಿ ಸಿಬ್ಬಂದಿಗಳ ಕೊರತೆ ಇದ್ದರೂ ಸಹಾ ಹಾಲಿ ಕಾರ್ಯನಿರತ ಸಿಬ್ಬಂದಿಗಳಿಂದಲೇ ನಿರಂತರ ವಿದ್ಯುತ್ ಪೂರೈಕೆ ಮಾಡಲು ಹಾಗೂ ಗ್ರಾಹಕರ ವಿದ್ಯುತ್ ಸಮಸ್ಯೆಗಳಿಗೆ ಸ್ಪಂದಿಸಿ ವಿದ್ಯುತ್ ಅಡಚಣೆಗಳನ್ನು ಸರಿಪಡಿಸಲು ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ. ಆದಾಗ್ಯೂ, ಅವಶ್ಯಕತೆಗೆ ಅನುಗುಣವಾಗಿ ಹೊರಗುತ್ತಿಗೆ ಆಧಾರದಲ್ಲಿ ಮಾನವ ಸಂಪನ್ಮೂಲ ಸೇವೆಗಳನ್ನು ಪಡೆದು ಸಾರ್ವಜನಿಕ ಸೇವೆಯಲ್ಲಿ ವ್ಯತ್ಯಯವುಂಟಾಗದಂತೆ ನೋಡಿಕೊಳ್ಳಲಾಗುತ್ತಿದೆ.

ಇಂಧನ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪೆನಿಯಲ್ಲಿ ದಿನಾಂಕ 30.06.2025 ರ ಅಂತ್ಯಕ್ಕಿರುವಂತೆ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ವಿವರಗಳು ಈ ಕೆಳಗಿನಂತಿರುತ್ತದೆ.

| ಗುಂಪು | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳ ಸಂಖ್ಯೆ |
|---|---|---|---|
| **ಎ** | **274** | **203** | **71** |
| **ಬಿ** | **377** | **238** | **139** |
| **ಸಿ** | **2844** | **2046** | **798** |
| **ಡಿ** | **5753** | **2763** | **2990** |
| **ಒಟ್ಟು** | **9248** | **5250** | **3998** |

(ಹುದ್ದೆಯ ಜಿಲ್ಲಾವಾರು ವಿವರಗಳನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ)

**ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯಲ್ಲಿ ಜೂನ್ 2025ರ ಅಂತ್ಯಕ್ಕೆ ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ಜಿಲ್ಲಾವಾರು ವಿವರವು ಈ ಕೆಳಗಿನಂತಿವೆ:

| ಜಿಲ್ಲೆಯ ಹೆಸರು | ಮಂಜೂರಾದ ಹುದ್ದೆಗಳು | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು | ಖಾಲಿಯಿರುವ ಹುದ್ದೆಗಳು |
|---|---|---|---|
| ಧಾರವಾಡ | 2355 | 1415 | 940 |
| ಹಾವೇರಿ | 1906 | 993 | 913 |
| ಉತ್ತರ ಕನ್ನಡ | 1858 | 982 | 876 |
| ಗದಗ | 1233 | 806 | 427 |
| ಬೆಳಗಾವಿ | 4940 | 2805 | 2135 |
| ಬಾಗಲಕೋಟೆ | 2268 | 1683 | 585 |
| ವಿಜಯಪುರ | 2336 | 1672 | 664 |
| ಒಟ್ಟು | 16896 | 10356 | 6540 |

**ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ;-** ಚಾವಿಸನಿನಿ ಯಲ್ಲಿ ಜೂನ್ಸ 2025ರ ಅಂತ್ಯಕ್ಕೆ ಜಿಲ್ಲಾವಾರು ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ | ಜಿಲ್ಲೆ | ಮಂಜೂರಾದ ಹುದ್ದೆಗಳು | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು | ಖಾಲಿಯಿರುವ ಹುದ್ದೆಗಳು |
|---|---|---|---|---|
| 1 | ಮೈಸೂರು | 3388 | 2174 | 1214 |
| 2 | ಮಂಡ್ಯ | 2318 | 1371 | 947 |
| 3 | ಚಾಮರಾಜ ನಗರ | 1167 | 643 | 524 |
| 4 | ಹಾಸನ | 2554 | 1739 | 815 |
| 5 | ಕೊಡಗು | 977 | 416 | 561 |
| ಒಟ್ಟು | | **10404** | **6343** | **4061** |

**ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಗುವಿಸ ಕಂಪನಿಯಲ್ಲಿ ದಿನಾಂಕ:30.06.2025 ಕ್ಕೆ ಮಂಜೂರಾಗಿರುವ ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಗಿನಂತಿವೆ.

| ಗುಂಪು | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿಯಿರುವ ಹುದ್ದೆಗಳ ಸಂಖ್ಯೆ |
|---|---|---|---|
| ಎ | **365** | **269** | **96** |
| ಬಿ | **423** | **353** | **70** |
| ಸಿ | **3515** | **2864** | **651** |
| ಡಿ | **5895** | **3864** | **2031** |
| ಒಟ್ಟು | **10198** | **7350** | **2848** |

(ಜಿಲ್ಲಾವಾರು ವಿವರಗಳು ಅನುಬಂಧದಲ್ಲಿ ಲಗತ್ತಿಸಿದೆ)

**ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ:-** ಕವಿಕಾ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮ 2024ರನ್ವಯ 414 ವಿವಿಧ ವೃಂದದ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಕವಿಕಾ ಸಂಸ್ಥೆಯಲ್ಲಿ ಪ್ರಸ್ತುತ ವಿವಿಧ ವೃಂದದ 100 ಅಧಿಕಾರಿ/ ಉದ್ಯೋಗಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.

**ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಯಲ್ ಲಿಮಿಟೆಡ್:-** ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಯಲ್ ಲಿಮಿಟೆಡ್ ಕಂಪನಿಯು ಇಂಧನ ಇಲಾಖೆಗೆ ಒಳಪಟ್ಟಿರುತ್ತದ. ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಒಟ್ಟು ಮಂಜೂರಾದ ಹುದ್ದೆಗಳು-391

| ವಿವರಗಳು | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|
| ಗ್ರೂಪ್- ಎ | 23 | 6 | 17 |
| ಗ್ರೂಪ್- ಬಿ | 25 | 7 | 18 |

| | | | |
|---|---|---|---|
| ಗ್ರೂಪ್- ಸಿ | 299 | 70 | 229 |
| ಗ್ರೂಪ್- ಡಿ | 44 | 6 | 38 |
| **ಒಟ್ಟು** | **391** | **89** | **302** |

ಮುಂದುವರೆದು, ಕಂಪನಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ 184 ನೌಕರರನ್ನು ಕಾರ್ಯನಿರ್ವಹಿಸುತ್ತಿರುವುದರಿಂದ ಕಂಪನಿಯ ದೈನಂದಿನ ಆಡಳಿತಾತ್ಮಕ ಕಾರ್ಯದಲ್ಲಿ ಯಾವುದೇ ತೊಂದರೆಯಾಗುತ್ತಿರುವುದಿಲ್ಲ.

**ವಿದ್ಯುತ್ ಪರಿವೀಕ್ಷಣಾಲಯ ಇಲಾಖೆ:-**

| ವೃಂದ | ಮಂಜೂರಾದ ಹುದ್ದೆ | ಕಾರ್ಯನಿರ್ವಹಿಸುತ್ತಿರುವ ಹುದ್ದೆ | ಖಾಲಿ ಇರುವ ಹುದ್ದೆ |
|---|---|---|---|
| ಎ | 98 | 88 | 10 |
| ಬಿ | 114 | 64 | 50 |
| ಸಿ | 148 | 72 | 76 |
| ಡಿ | 48 | 5 | 43 |
| **ಒಟ್ಟು** | **408** | **229** | **179** |

ಮಾಹಿತಿಯನ್ನು **ಅನುಬಂಧ-2**ರಲ್ಲಿ ಒದಗಿಸಲಾಗಿದೆ.

**ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್:-** ಪಿಸಿಕೆಎಲ್ ಸಂಸ್ಥೆಯಲ್ಲಿ ಅವಶ್ಯವಿರುವ ಸಿಬ್ಬಂದಿಗಳ ವಿವರ ಈ ಕೆಳಗಿನಂತಿದೆ.

| | |
|---|---|
| ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ | 50 |
| ಕಾರ್ಯನಿರತ ಒಟ್ಟು ಹುದ್ದೆಗಳ ಸಂಖ್ಯೆ | 41 |
| ಖಾಲಿ ಇರುವ ಹುದ್ದೆಗಳ ಸಂಖ್ಯೆ | 09 |

**ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ:-** ಇಂಧನ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯ ಸಿಬ್ಬಂದಿಗಳ ವಿವರಗಳು ಈ ಕೆಳಕಂಡಂತಿವೆ:

| ಕ್ರ. ಸಂ | ಗ್ರೂಪ್ | ಸರ್ಕಾರದಿಂದ ಅನುಮೋದನೆ ಗೊಂಡ ಹುದ್ದೆಗಳು | ಭರ್ತಿ ಮಾಡಲಾದ ಹುದ್ದೆಗಳು | | ಖಾಲಿ ಹುದ್ದೆಗಳ ವಿವರ |
|---|---|---|---|---|---|
| | | | ಖಾಯಂ | ನಿಯೋಜನೆ | |
| 1 | ಎ | 11 | 1 | 7 | 3 |
| 2 | ಬಿ | 8 | 6 | 0 | 2 |
| 3 | ಸಿ | 39 | 15 | 2 | 22 |
| 4 | ಡಿ | 5 | 2 | 0 | 3 |
| **ಒಟ್ಟು** | | **63** | **24** | **09** | **30** |

ಅವಶ್ಯಕ ಕಾರ್ಯಗಳನ್ನು ನಿರ್ವಹಿಸಲು ಖಾಲಿ ಇರುವ ಹುದ್ದೆಗಳಲ್ಲಿ ಗ್ರೂಪ್-'ಎ' ವೃಂದದ ಅಧಿಕಾರಿಗಳನ್ನು ನಿಯೋಜನೆ ಮೇಲೆ ಹಾಗೂ ದಿನನಿತ್ಯದ ಸಹಾಯಕ ಕಾರ್ಯಗಳನ್ನು ನಿರ್ವಹಿಸಲು ಗ್ರೂಪ್-'ಸಿ' ಮತ್ತು 'ಡಿ' ವೃಂದದ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಪಡೆದು ಕಾರ್ಯನಿರ್ವಹಿಸಲಾಗುತ್ತಿದೆ.

ಇ) ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳು ಅತ್ಯವಶ್ಯಕವಾಗಿರುವುದರಿಂದ ಖಾಲಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು; (ಸಂಪೂರ್ಣ ಮಾಹಿತಿ ಒದಗಿಸುವುದು)

**ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ:-**

1. 2023-24 ಮತ್ತು 2024-25 ರ ಅವಧಿಯಲ್ಲಿ, 399-ಸಹಾಯಕ ಇಂಜಿನಿಯರ್ (ವಿದ್ಯುತ್), 16-ಸಹಾಯಕ ಇಂಜಿನಿಯರ್ (ಸಿವಿಲ್), 531-ಕಿರಿಯ ಇಂಜಿನಿಯರ್ (ವಿದ್ಯುತ್), 11-ಕಿರಿಯ ಇಂಜಿನಿಯರ್ (ಸಿವಿಲ್) ಮತ್ತು 254-ಕಿರಿಯ ಸಹಾಯಕ, ಒಟ್ಟು 1211 ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿ ನೇಮಕಾತಿ ಆದೇಶಗಳನ್ನು ಜಾರಿ ಮಾಡಲಾಗಿರುತ್ತದೆ.

| | | |
|---|---|---|
| | | 2. ಮುಂದುವರೆದು, 2024-25 ರ ಅವಧಿಯಲ್ಲಿ, ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಖಾಲಿ ಇರುವ ನಿರ್ವಹಣಾ ಪದವೃಂದದ 433-ಕಿರಿಯ ಸ್ಟೇಷನ್ ಪರಿಚಾರಕ ಮತ್ತು 2542-ಕಿರಿಯ ಪವರ್‌ಮ್ಯಾನ್, ಒಟ್ಟು 2975 ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 14.10.2024 ರಂದು ಉದ್ಯೋಗ ಪ್ರಕಟಣೆ ಹೊರಡಿಸಲಾಗಿರುತ್ತದೆ. ಸದರಿ ನೇಮಕಾತಿ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ.<br><br>**ಕರ್ನಾಟಕ ವಿದ್ಯುತ್ ನಿಗಮ ನಿಯಮಿತ:-** ಪ್ರಸ್ತುತ ನಿಗಮದ ವೈಟಿಪಿಎಸ್ ಹಾಗೂ ವೈಸಿಸಿಪಿಪಿ(ಯಲಹಂಕ), ವಿದ್ಯುತ್ ಕೇಂದ್ರಗಳ ಓ&ಎಂ ಕಾರ್ಯಗಳನ್ನು ಖಾಸಗಿ ಸಂಸ್ಥೆಗೆ ಹೊರಗುತ್ತಿಗೆ ನೀಡಲಾಗಿದೆ ಮತ್ತು ಹೈಡಲ್ ವಿದ್ಯುತ್ ಸ್ಥಾವರಗಳನ್ನು ಯಾಂತ್ರೀಕರಣ(Automation) ಗೊಳಿಸಲಾಗುತ್ತಿದೆ. ಆದ್ದರಿಂದ ಮಾನವ ಸಂಪನ್ಮೂಲದ ಅವಶ್ಯಕತೆಯು ಕಡಿಮೆ ಆಗಿರುತ್ತದೆ.<br><br>**ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಪ್ರಸ್ತುತ, ಕವಿಪ್ರನಿನಿ.,ಯಿಂದ ಸಾಮಾನ್ಯ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ ಬಿ16/ 44953/ 2023-24 ದಿನಾಂಕ: 14.10.2024 ರ ಪ್ರಕಾರ ಹುವಿಸಕಂನಿ.,ಯಲ್ಲಿ 560 ಕಿರಿಯ ಪವರಮ್ಯಾನ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆಯು ಜಾರಿಯಲ್ಲಿದ್ದು, 1:5 ಅನುಪಾತದಲ್ಲಿ ಆಯ್ಕೆಗೊಂಡ ಅರ್ಹ ಅಭ್ಯರ್ಥಿಗಳ ಸಹನಾ ಶಕ್ತಿ ಪರೀಕ್ಷೆಯನ್ನು ಪೂರ್ಣಗೊಳಿಸಲಾಗಿರುತ್ತದೆ. ನೇಮಕಾತಿಯನ್ನು ಪೂರ್ಣಗೊಳಿಸುವಲ್ಲಿ ಮುಂದಿನ ಅಗತ್ಯ ಕ್ರಮ ವಹಿಸಲಾಗುತ್ತಿದೆ.<br><br>**ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಬೆವಿ ಕಂಪನಿ ಹಾಗೂ ಇತರೆ ಎಸ್ಕಾಂಗಳಲ್ಲಿನ ಆಡಳಿತ ವ್ಯಾಪ್ತಿಯ ಕಚೇರಿಗಳಲ್ಲಿ ಖಾಲಿ ಇರುವ ಅವಶ್ಯಕ ಹುದ್ದೆಗಳ ಭರ್ತಿಗಾಗಿ ಕವಿಪ್ರನಿನಿ ವತಿಯಿಂದಲೇ ಕೇಂದ್ರೀಯವಾಗಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗುತ್ತಿರುತ್ತದೆ.<br>ಪ್ರಸ್ತುತ ಬೆಸ್ಕಾಂ ವ್ಯಾಪ್ತಿಯಲ್ಲಿ 935 ಕಿರಿಯ ಪವರ್ ಮ್ಯಾನ್ ಹುದ್ದೆಗಳ ಭರ್ತಿಗಾಗಿ ದಿನಾಂಕ:14.10.2024 ರಂದು ಕವಿಪ್ರನಿನಿ ವತಿಯಿಂದ ನೇಮಕಾತಿ ಅಧಿಸೂಚನೆಯನ್ನು ಹೊರಡಿಲಾಗಿರುತ್ತದೆ. ನೇಮಕಾತಿ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ (**ಅನುಬಂಧ-3 ರಲ್ಲಿ** ಒದಗಿಸಲಾಗಿದೆ).<br><br>**ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಮಂಗಳೂರು ವಿದ್ಯುತ್ ಸರಬರಾಜು ಕಂಪೆನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿಯಡಿ ನಿಯಮಾನುಸಾರ ಭರ್ತಿ ಮಾಡಲು ಮುಂದಿನ ದಿನಗಳಲ್ಲಿ ಸರ್ಕಾರದ ಹಾಗೂ ಕವಿಪ್ರನಿನಿಯ ನಿರ್ದೇಶನದಂತೆ ಕ್ರಮ ಜರೂಗಿಸಲಾಗುವುದು.<br><br>ಕವಿಪ್ರನಿನಿ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023-24 ದಿನಾಂಕ 14.10.2024 ರ ಪ್ರಕಾರ 2024-25 ನೇ ಸಾಲಿನಲ್ಲಿ ಮೆಸ್ಕಾಂ ಕಾರ್ಯವ್ಯಾಪ್ತಿಗೆ ಒಟ್ಟು 449 ಕಿರಿಯ ಪವರ್‌ಮ್ಯಾನ್ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಪ್ರಕಟಣೆ ಆಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. (ಪ್ರತಿಯನ್ನು ಲಗತ್ತಿಸಿದೆ)<br><br>**ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ:-** ಚಾವಿಸನಿನಿಯಲ್ಲಿ ಖಾಲಿಯಿರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕವಿಪ್ರನಿನಿ ಹಾಗೂ ಎಲ್ಲಾ |

ಎಸ್ಕಾಂಗಳ ಪರವಾಗಿ ನೇಮಕಾತಿ ಪ್ರಕ್ರಿಯೆಯನ್ನು ಕವಿಪ್ರನಿನಿ ವತಿಯಿಂದ ನಿರ್ವಹಿಸಲಾಗಿರುತ್ತದೆ.

**ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ:-** ಗುವಿಸ ಕಂಪನಿಯಲ್ಲಿ ಪ್ರಸ್ತುತ 199 ಕಿರಿಯ ಪವರ್ ಮ್ಯಾನ್ ಹುದ್ದೆಗಳಿಗೆ ದಿನಾಂಕ:14.10.2024 ರಂದು ಕವಿಪ್ರನಿನಿಯಿಂದ ಅಧಿಸೂಚನೆ ಹೊರಡಿಸಲಾಗಿದೆ. ಪ್ರಸ್ತುತ ಅಭ್ಯರ್ಥಿಗಳ ಸಹನಾ ಶಕ್ತಿ ಪರೀಕ್ಷೆ ಮುಗಿದಿದ್ದು, ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸುವ ಹಂತದಲ್ಲಿರುತ್ತದೆ. ಉಳಿದೆ ಹುದ್ದೆಗಳನ್ನು ಅವಶ್ಯಕತೆ ಅನುಸಾರ ಹಂತ ಹಂತವಾಗಿ ಭರ್ತಿ ಮಾಡಲಾಗುವುದು.

**ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಯಲ್ ಲಿಮಿಟೆಡ್:-** ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024 ದಿನಾಂಕ:25.11.2024 ರನ್ವಯ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಪ್ರಸ್ತುತ ಕಂಪನಿಯಲ್ಲಿ ಯಾವುದೇ ಹೊಸ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುವುದಿಲ್ಲ.

**ವಿದ್ಯುತ್ ಪರಿವೀಕ್ಷಣಾಲಯ ಇಲಾಖೆ:-** ಇಲಾಖೆಯಲ್ಲಿ ರಿಕ್ತವಾಗಿರುವ ಗ್ರೂಪ್ 'ಬಿ' ವೃಂದದ 47 ಸಹಾಯಕ ವಿದ್ಯುತ್ ಪರಿವೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಗ್ರೂಪ್ 'ಸಿ' ವೃಂದದ 16 ಪ್ರ.ದ.ಸ ಮತ್ತು 16 ದ್ವಿ.ದ.ಸ ಹುದ್ದೆಗಳನ್ನು ಭರಿಸಲು ಕೆಪಿಎಸ್‌ಸಿ.ಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು.

ಆದರೆ, ಒಳ ಮೀಸಲಾತಿ ಆದೇಶ ಹೊರಡಿಸದ ನಂತರ 16 ದ್ವಿ.ದ.ಸ. ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಯನ್ನು ಮರು ಸಲ್ಲಿಸುವಂತೆ ತಿಳಿಸಿ ಹಿಂದಿರುಗಿಸಿರುತ್ತಾರೆ.

**ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್:-** ಪಿಸಿಕೆಎಲ್ ಸಂಸ್ಥೆಯು ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ಸ್ಪೆಷಲ್ ಪರ್ಪಸ್ ವೆಹಿಕಲ್ ಆಗಿದ್ದು, ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ ನೌಕರರು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ಎಸ್ಕಾಂಗಳಿಂದ ನಿಯೋಜನೆಗೊಂಡಿರುತ್ತಾರೆ. ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕವಿಪ್ರನಿನಿ ಮತ್ತು ಎಸ್ಕಾಂಗಳನ್ನು ಕೋರಲಾಗಿದೆ.

**ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ:-** ಸಂಸ್ಥೆಯಲ್ಲಿ ಖಾಲಿ ಇರುವ ನೇರ ನೇಮಕಾತಿಯ 25 ಹುದ್ದೆಗಳನ್ನು ಭರ್ತಿ ಮಾಡಲು ಪತ್ರ ಸಂಖ್ಯೆ: ಕೆಆರ್‌ಇಡಿಎಲ್/01-ಆಡಳಿತ/13/2025/880 ದಿನಾಂಕ:18.03.2025ರಲ್ಲಿ ಭರ್ತಿ ಮಾಡುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಲಾಗಿದೆ.

| | | |
|---|---|---|
| ಈ) | ಅವಶ್ಯವಿರುವ ಇಂಜಿನಿಯರ್ ಹುದ್ದೆಗಳನ್ನು ಸ್ಥಳೀಯವಾಗಿ ಲಭ್ಯವಿರುವ ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಚಿಂತನೆ ಸರ್ಕಾರ ನಡೆಸಿದೆಯೇ; ಹಾಗಿದ್ದಲ್ಲಿ ಮಾಹಿತಿ ಒದಗಿಸುವುದು? | ಅವಶ್ಯವಿರುವ ಇಂಜಿನಿಯರ್ ಹುದ್ದೆಗಳನ್ನು ಕಾಲಕಾಲಕ್ಕೆ ನೇರ ನೇಮಕಾತಿ ಮುಖಾಂತರ ಹಾಗೂ ಪದೋನ್ನತಿ ಮುಖಾಂತರ ಭರ್ತಿ ಮಾಡಲಾಗುತ್ತಿದೆ. |

ಸಂಖ್ಯೆ: ಎನರ್ಜಿ 170 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು